# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 326
ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 18.07.2024
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನವಲಿ ಸಮಾನಾಂತರ ಜಲಾಶಯವನ್ನು ನಿರ್ಮಿಸಲು ಡಿ.ಪಿ.ಆರ್ ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವಾಗ ತಯಾರಿಸಲಾಗುವುದು; ಅದನ್ನು ಸರ್ಕಾರ ಒಪ್ಪಿದೆಯೇ; (ಪ್ರತಿಯನ್ನು ಒದಗಿಸುವುದು) | ತುಂಗಭದ್ರಾ ಜಲಾಶಯದಲ್ಲಿ ತುಂಬಿರುವ ಹೂಳಿನಿಂದಾಗಿ ಉಂಟಾಗಿರುವ ನೀರಿನ ಸಂಗ್ರಹಣೆಯಲ್ಲಿನ ಕೊರತೆಯನ್ನು ನೀಗಿಸಲು ಪರ್ಯಾಯ ಮಾರ್ಗೋಪಾಯವಾಗಿ ಕೊಪ್ಪಳ ಜಿಲ್ಲೆಯ ನವಿಲೆ ಗ್ರಾಮದ ಹತ್ತಿರ ಸಮತೋಲನಾ ಜಲಾಶಯ ನಿರ್ಮಿಸುವ ಯೋಜನೆಯ ಪ್ರಸ್ತಾವನೆಯನ್ನು ರೂ.15,601.00 ಕೋಟಿ ಮೊತ್ತದ (ಚಾಲ್ತಿಯಲ್ಲಿರುವ 2021-22ನೇ ಸಾಲಿನ ಏಕರೂಪ ದರಪಟ್ಟಿಯನ್ವಯ) ವಿವರವಾದ ವರದಿಯನ್ನು ತಯಾರಿಸಲಾಗಿರುತ್ತದೆ. |
| ಆ) | ಈ ಜಲಾಶಯ ನಿರ್ಮಾಣಕ್ಕೆ ಮೀಸಲಿಟ್ಟ ಅನುದಾನ ಎಷ್ಟು; ಇದರ ಟೆಂಡರ್ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು; (ಮಾಹಿತಿ ಒದಗಿಸುವುದು) | ತುಂಗಭದ್ರಾ ಯೋಜನೆಯು ಒಂದು ಅಂತರ ರಾಜ್ಯ ವಿವಿಧೋದ್ದೇಶ ಯೋಜನೆಯಾಗಿರುವುದರಿಂದ, ನವಲಿ ಸಮತೋಲನ ಜಲಾಶಯ ನಿರ್ಮಾಣ ಯೋಜನೆಯ ಅನುಷ್ಠಾನಕ್ಕೆ ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಸಹಮತಿ ಹಾಗೂ ತುಂಗಭದ್ರಾ ಮಂಡಳಿಯ ಅನುಮೋದನೆ ಪಡೆಯಲು ಕ್ರಮವಹಿಸಲಾಗುತ್ತಿದೆ.<br>ಈ ಹಿನ್ನೆಲೆಯಲ್ಲಿ, ಸದರಿ ಯೋಜನೆಯನ್ನು ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಸಹಮತಿ, ಸಹಕಾರ ಮತ್ತು ತುಂಗಭದ್ರಾ ಮಂಡಳಿಯ ಅನುಮೋದನೆಯೊಂದಿಗೆ ಅಗತ್ಯ ಅನುದಾನ ಒದಗಿಸಿ, ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |
| ಇ) | ಈ ನವಲಿ ಸಮಾನಾಂತರ ಜಲಾಶಯದ ನಿರ್ಮಾಣದಿಂದ ಮುಳುಗಡೆಯಾಗುವ ಭೂಮಿ ಎಷ್ಟು; ಇದಕ್ಕೆ ಖರ್ಚಾಗುವ ಹಣ ಎಷ್ಟು; ಈ ಜಲಾಶಯದಲ್ಲಿ ಸಿಗುವ ಒಟ್ಟು ನೀರೆಷ್ಟು? (ವಿವರಗಳೊಂದಿಗೆ ಮಾಹಿತಿ ನೀಡುವುದು) | ನವಲಿ ಸಮಾನಾಂತರ ಜಲಾಶಯವನ್ನು ಸಂಗ್ರಹಣಾ ಸಾಮರ್ಥ್ಯ 30 ಟಿಎಂಸಿಗೆ ವಿನ್ಯಾಸಿಸಲಾಗಿದ್ದು, ಜಲಾಶಯ ನಿರ್ಮಾಣದಿಂದ 7,657.76 ಹೆಕ್ಟೇರ್ ಪ್ರದೇಶ ಮುಳುಗಡೆಯಾಗಲಿದ್ದು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ನಿರ್ಮಾಣಕ್ಕೆ ರೂ.3783.53 ಕೋಟಿ ವೆಚ್ಚವಾಗುವುದೆಂದು ಅಂದಾಜಿಸಲಾಗಿದೆ. |

ಸಂಖ್ಯೆ:ಜಸಂಇ 79 ಎಂಎಲ್ಎ 2024

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ